<u>**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ರವರ ನ್ಯಾಯಾಲಯ, ತರೀಕೆರೆ**</u>

<u>**ಸಂಚಾರಿ ನ್ಯಾಯಾಲಯ, ಅಜ್ಜಂಪುರ**</u>

<u>**ಸಿ.ಸಿ.ನಂಃ 493/2024**</u>

<u>**ಫಿರ್ಯಾದುದಾರರುಃ**</u> ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

<u>**ಆರೋಪಿಃ**</u>

ಶ್ರೀ ಉಮೇಶ,
ಬಿನ್ ಲೇಟ್ ಶ್ರೀ ಲಕ್ಷ್ಮಣ,
45 ವರ್ಷಗಳು,
ವಾಸಃ ಸೊಕ್ಕೆ ತಿಮ್ಮಾಪುರ ಗ್ರಾಮ,
ಅಜ್ಜಂಪುರ ತಾಲ್ಲೂಕು.

<u>**ದೋಷಾರೋಪಣೆ**</u>

ಶ್ರೀ. ರಾಹುಲ್ ಶೆಟ್ಟಿಗಾರ್, ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಯಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕಃ 22.01.2024 ರಂದು ರಾತ್ರಿ 8.00 ಗಂಟೆ ಸುಮಾರಿಗೆ ಅಜ್ಜಂಪುರ ಪೊಲೀಸ್ ಠಾಣಾ ವ್ಯಾಪ್ತಿಯ ಸೊಕ್ಕೆತಿಮ್ಮಾಪುರ ಗ್ರಾಮದಲ್ಲಿ ನೀವು ಆರೋಪಿ ನಿಮ್ಮ ಅಂಗಡಿ ಮುಂಭಾಗದ ಕಾಂಕ್ರೀಟ್ ರಸ್ತೆಯಲ್ಲಿ ಸುಮಾರು ರೂ.1480/- ಬೆಲೆಯ 90 ಎಂ ಎಲ್ ನ 37 ರಾಜಾ ವಿಸ್ಕಿ ಮದ್ಯದ ಪೌಚ್‌ಗಳನ್ನು ಸರ್ಕಾರದ ಯಾವುದೇ ಪರವಾನಗಿ ಇಲ್ಲದೇ ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಾರಾಟ ಮಾಡಿ ಹಣ ಸಂಪಾದನೆ ಮಾಡುವ ಉದ್ದೇಶದಿಂದ ಮಾರಾಟ ಮಾಡುತ್ತಿದ್ದಾಗ ಚಾಸಾ-1 ರವರು ಚಾಸಾ-2 ರಿಂದ 4 ರವರೊಂದಿಗೆ ದಾಳಿ ಮಾಡಿದ ಕಾಲಕ್ಕೆ ಸಿಕ್ಕಿರುತ್ತೀರಿ. ಈ ರೀತ್ಯಾ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ 32 ಹಾಗೂ 34 ರ ಅಡಿಯಲ್ಲಿ

ದಂಡನೀಯವಾದ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ ಎಂದು ದೋಷಾರೋಪಿಸಲಾಗಿದೆ.

ಸದರಿ ಮೇಲ್ಕಂಡ ಆರೋಪಗಳನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿದ್ದರಿಂದ ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರ:1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿ ಉತ್ತರಃ Yes

ಪ್ರ:2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆ ಆಗಬೇಕೋ?

ಆರೋಪಿ ಉತ್ತರಃ Pleaded not guilty and claimed to be tried

(ಆರೋಪಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ: 26.12.2025.

ಸಹಿ/-
(ರಾಹುಲ್ ಶೆಟ್ಟಿಗಾರ್)
ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ತರೀಕೆರೆ.
(ಸಂಚಾರಿ ನ್ಯಾಯಾಲಯ, ಅಜ್ಜಂಪುರ)

**ಆರೋಪಿ ಸಹಿಃ**